ಅಧ್ಯಕ್ಷರು: ಖಂಡ 10 ರಿಂದ 13 ರ ವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 10 ರಿಂದ 13 ರವರೆಗೆ, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ:

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಪಟ್ಟಿತು)

(ಪ್ರಸ್ತಾಪದ ಅಂಗೀಕಾರ)

ಡಾ ಎ.ಬಿ.ಮಾಲಕರೆಡ್ಡಿ: (ವೈದ್ಯಕೀಯ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೇ, "2003ರ ಕರ್ನಾಟಕ ವೈದ್ಯಕೀಯ ನೊಂದಣಿ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿಯಾದ ರೀತಿಯಲ್ಲಿ ಅಂಗೀಕರಿಸಬೇಕೆಂದು ಕೋರುತ್ತೇನೆ"

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

" 2003ರ ಕರ್ನಾಟಕ ವೈದ್ಯಕೀಯ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿಯಾದ ರೀತಿಯಲ್ಲಿ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(iv) ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕ 2003

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಡಿ.ಬಿ.ಚಂದ್ರೇಗೌಡ (ಮಾನ್ಯ ಕಾನೂನು ಮತ್ತು ಸಂಸದೀಯ ಸಚಿವರು): (ಮಾನ್ಯ ಜಲ ಸಂಪನ್ಮೂಲ ಸಚಿವರು ಪರವಾಗಿ): ಮಾನ್ಯ ಅಧ್ಯಕ್ಷರೇ, " ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2003ರ ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ"

ಪ್ರಸ್ತಾವವನ್ನು ಮಂಡಿಸಲಾಯಿತು

ಗೊಂದಲ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ:

" ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2003ನೇ ಸಾಲಿನ ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಗೊಂದಲ

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 3 ರವರೆಗೆ, ಎರಡೂ ಸೇರಿದಂತೆ,

ಪ್ರಸ್ತಾವ ಏನೆಂದರೆ:

ಅಧ್ಯಕ್ಷರು: ಖಂಡ 2 ರಿಂದ 3 ರವರೆಗೆ ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 3ರ ವರೆಗೆ, ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ:

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

" ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಡಿ.ಬಿ.ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ಸಚಿವರು): (ಮಾನ್ಯ ಜಲಸಂಪನ್ಮೂಲ ಸಚಿವರು ಪರವಾಗಿ): ಮಾನ್ಯ ಅಧ್ಯಕ್ಷರೇ, " ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2003ನೇ ಸಾಲಿನ ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ".

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

" ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2003ನೇ ಸಾಲಿನ ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(ಆ) ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ – 2002

(ತಿದ್ದುಪಡಿ ವಿಧೇಯಕವನ್ನು ಹಿಂತೆಗೆದುಕೊಳ್ಳಲು ಅನುಮತಿ)

ಶ್ರೀ ಎಸ್.ಎಂ.ಕೃಷ್ಣ (ಮುಖ್ಯ ಮಂತ್ರಿಗಳು)ರವರ ಪರವಾಗಿ ಶ್ರೀ ಡಿ.ಬಿ.ಚಂದ್ರೇಗೌಡ (ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, ನಾನು " ದಿನಾಂಕ 04–03–03 ರಂದು ವಿಧಾನಸಭೆಯಲ್ಲಿ ಮಂಡಿಸಲಾಗಿರುವ 2002ನೇ ಸಾಲಿನ ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕವನ್ನು ಹಿಂತೆಗೆದುಕೊಳ್ಳಲು ಈ ಸಭೆಯು ಅನುಮತಿ ನೀಡಬೇಕೆಂದು ಕೇಳಿಕೊಳ್ಳುತ್ತೇನೆ".

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, " ದಿನಾಂಕ 04–03–03 ರಂದು ವಿಧಾನಸಭೆಯಲ್ಲಿ ಮಂಡಿಸಲಾಗಿರುವ 2002ನೇ ಸಾಲಿನ ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕವನ್ನು ಮಾನ್ಯ ಸಚಿವರು ಹಿಂತೆಗೆದುಕೊಳ್ಳಲು ಅನುಮತಿ ನೀಡುವುದು"

(ಪ್ರಸ್ತಾವವನ್ನು ಅಂಗೀಕರಿಸಲಾಯಿತು ಮತ್ತು ಮಾನ್ಯ ಸಚಿವರು ದಿನಾಂಕ 04–03–03 ರಂದು ವಿಧಾನಸಭೆಯಲ್ಲಿ ಮಂಡಿಸಲಾಗಿರುವ 2002ನೇ ಸಾಲಿನ ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕವನ್ನು ಹಿಂತೆಗೆದುಕೊಳ್ಳಲು ಅನುಮತಿ ನೀಡಲಾಯಿತು)